ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 20ನೇ ಜುಲೈ, 2015
(ಸಮಯ: ಬೆಳಗ್ಗೆ 11.00 ಗಂಟೆಗೆ)

------

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಹದಿನಾರನೇ ಪಟ್ಟಿ
ಆ) ದಿನಾಂಕ 29.06.2015ರ ಒಂದನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 13(100)	:	ಅರಣ್ಯ ಸಚಿವರು
ಇ) ದಿನಾಂಕ 02.07.2015ರ ನಾಲ್ಕನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಕೆ.ವಸಂತಬಂಗೇರ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 59(518)	:	ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು
ಈ) ದಿನಾಂಕ 15.07.2015ರ ಹದಿಮೂರನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 188(1863)	:	ಕಂದಾಯ ಸಚಿವರು
ಉ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಹದಿನಾರನೇ ಪಟ್ಟಿ

2. ವರದಿಗಳನ್ನೊಪ್ಪಿಸುವುದು

1. **ಶ್ರೀ ಗೋವಿಂದ ಎಂ.ಕಾರಜೋಳ, (ಅಧ್ಯಕ್ಷರು, ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ) ಅವರು**:- 2014-15ನೇ ಸಾಲಿನ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ ಐದನೇ ವರದಿಯನ್ನೊಪ್ಪಿಸುವುದು.

2. **ಡಾ|| ಎ.ಬಿ.ಮಾಲಕರೆಡ್ಡಿ, (ಅಧ್ಯಕ್ಷರು, ಅಧೀನ ಶಾಸನ ರಚನಾ ಸಮಿತಿ) ಅವರು**:- 2014-15ನೇ ಸಾಲಿನ ಅಧೀನ ಶಾಸನ ರಚನಾ ಸಮಿತಿಯ ನಲವತ್ತೆರಡನೇ ವರದಿಯನ್ನೊಪ್ಪಿಸುವುದು.

ಮು.ತಿ.ನೋ.,.

3. ಅವಿಶ್ವಾಸ ನಿರ್ಣಯದ ಪ್ರಸ್ತಾವನೆ ಮೇಲೆ ಚರ್ಚೆ

ವಿಧಾನಸಭಾ ಸದಸ್ಯರು ಹಾಗೂ ಕರ್ನಾಟಕ ಜನತಾದಳ (ಜಾ) ಶಾಸಕಾಂಗ ಪಕ್ಷದ ನಾಯಕರಾದ ಶ್ರೀ ಹೆಚ್.ಡಿ.ಕುಮಾರಸ್ವಾಮಿ ಮತ್ತು ಇತರರು ನೀಡಿರುವ ಈ ಕೆಳಕಂಡ ಪ್ರಸ್ತಾವದ ಮೇಲೆ ಚರ್ಚೆ:

"ಶ್ರೀ ಸಿದ್ಧರಾಮಯ್ಯ ಮಾನ್ಯ ಮುಖ್ಯಮಂತ್ರಿಗಳು ಹಾಗೂ ಅವರ ಸಚಿವ ಸಂಪುಟದ ವಿರುದ್ಧ ಅವಿಶ್ವಾಸವನ್ನು ವ್ಯಕ್ತಪಡಿಸುತ್ತದೆ".

4. ವಿತ್ತೀಯ ಕಾರ್ಯಕಲಾಪಗಳು

2015-16ನೇ ಸಾಲಿನ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ಮುಂದುವರೆದ ಚರ್ಚೆ:

ಬೇಡಿಕೆ ಸಂಖ್ಯೆ	ಬೇಡಿಕೆಗಳ ಹೆಸರು
21	ಜಲಸಂಪನ್ಮೂಲ
03	ಆರ್ಥಿಕ
04	ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ
18	ವಾಣಿಜ್ಯ ಮತ್ತು ಕೈಗಾರಿಕೆ
24	ಇಂಧನ
12	ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನಸೇವೆಗಳು
17	ಶಿಕ್ಷಣ
02	ಪಶುಸಂಗೋಪನೆ ಮತ್ತು ಮೀನುಗಾರಿಕೆ
27	ಕಾನೂನು
28	ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
08	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
14	ಕಂದಾಯ
05	ಒಳಾಡಳಿತ ಮತ್ತು ಸಾರಿಗೆ
16	ವಸತಿ
19	ನಗರಾಭಿವೃದ್ಧಿ
22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ
10	ಸಮಾಜ ಕಲ್ಯಾಣ
15	ಮಾಹಿತಿ ತಂತ್ರಜ್ಞಾನ

ಮು.ತಿ.ನೋ.,.

26	ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ
13	ಆಹಾರ ಮತ್ತು ನಾಗರೀಕ ಸರಬರಾಜು
06	ಮೂಲಭೂತ ಸೌಕರ್ಯ ಅಭಿವೃದ್ಧಿ
11	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
25	ಕನ್ನಡ ಮತ್ತು ಸಂಸ್ಕೃತಿ
23	ಕಾರ್ಮಿಕ

5. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಹೆಚ್.ಕೆ.ಕುಮಾರಸ್ವಾಮಿ ಅವರು ಹಾಸನ ಜಿಲ್ಲೆ ಸಕಲೇಶಪುರ ಮತ್ತು ಆಲೂರು ತಾಲ್ಲೂಕುಗಳಲ್ಲಿ ಆನೆಗಳ ಹಾವಳಿಯಿಂದ ಉಂಟಾಗುತ್ತಿರುವ ಬೆಳೆ ಹಾಗೂ ಪ್ರಾಣ ಹಾನಿ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

2. ಶ್ರೀ ಸಿ.ಟಿ. ರವಿ ಅವರು ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮವು ರೇಷ್ಮೆ ನೂಲಿನ ಖರೀದಿಗಾಗಿ ಕರೆದಿದ್ದ ಇ-ಟೆಂಡರಿನಲ್ಲಿ ಅವ್ಯವಹಾರ ಎಸಗಿರುವ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

3. ಶ್ರೀ ಎಂ. ಸತೀಶ್ ರೆಡ್ಡಿ ಅವರು ಬೆಂಗಳೂರಿನ ಸೋಮಸಂದ್ರ ಪಾಳ್ಯ, ಹೆಚ್.ಎಸ್.ಆರ್ ಲೇಔಟ್‌ನಲ್ಲಿರುವ ಕೆ.ಸಿ.ಡಿ.ಸಿ. ಗೊಬ್ಬರ ಕಾರ್ಖಾನೆಯಲ್ಲಿ ಬಾಲಕ ಮೃತಪಟ್ಟಿರುವ ಬಗ್ಗೆ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಂಡು ಮೃತರ ಕುಟುಂಬಕ್ಕೆ ಪರಿಹಾರ ನೀಡುವ ಬಗ್ಗೆ ಮಾನ್ಯ ಕಾರ್ಮಿಕ ರಾಜ್ಯ ಸಚಿವರ ಗಮನ ಸೆಳೆಯುವುದು.

4. ಶ್ರೀ ಸಾ.ರಾ. ಮಹೇಶ್ ಅವರು ತುಮಕೂರಿನ ಸಿದ್ಧಗಂಗಾ ಮಠದ ಶ್ರೀಗಳಾದ ಡಾ॥ ಶ್ರೀ ಶ್ರೀ ಶ್ರೀ ಶಿವಕುಮಾರ ಮಹಾಸ್ವಾಮಿಗಳಿಗೆ ಭಾರತ ರತ್ನ ಪ್ರಶಸ್ತಿ ನೀಡಲು ಶಿಫಾರಸ್ಸು ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

5. ಶ್ರೀ ಜಿ.ಹೆಚ್. ಶ್ರೀನಿವಾಸ ಅವರು ತರಿಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಭದ್ರಾ ಜಲಾಶಯದ ಮುಂಭಾಗದಲ್ಲಿ ಕೆ.ಆರ್.ಎಸ್. ಮಾದರಿಯಲ್ಲಿ ಬೃಂದಾವನವನ್ನು ನಿರ್ಮಿಸುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

6. ಶ್ರೀ ಸಿ.ಎನ್. ಬಾಲಕೃಷ್ಣ ಅವರು ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಚನ್ನರಾಯಪಟ್ಟಣ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜು ಮತ್ತು ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜುಗಳಲ್ಲಿ ಕೊಠಡಿಗಳ ಮತ್ತು ಸಿಬ್ಬಂದಿಗಳ ಕೊರತೆಯಿಂದ ವಿದ್ಯಾರ್ಥಿಗಳಿಗೆ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

7. ಶ್ರೀ ಪ್ರತಾಪಗೌಡ ಪಾಟೀಲ್ ಅವರು ಮಸ್ಕಿ ವಿಧಾನಸಭಾ ಕ್ಷೇತ್ರದ ಸಿಂಧನೂರು ತಾಲ್ಲೂಕಿನ ದುರ್ಗಾ ಕ್ಯಾಂಪಿನಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದ ಕೃಷಿ ಕಾರ್ಮಿಕನ ಕುಟುಂಬಕ್ಕೆ ಪರಿಹಾರ ಒದಗಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

8. ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು ನಿರಂತರ ಜ್ಯೋತಿ ಯೋಜನೆಯ ಕಳಪೆ ಕಾಮಗಾರಿಯಿಂದ ರೈತರಿಗೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

9. ಶ್ರೀ ಬಿ. ಸುರೇಶಗೌಡ ಅವರು ತುಮಕೂರು ಗ್ರಾಮಾಂತರ ಹೆಬ್ಬೂರು ಹೋಬಳಿ ಕೇಂದ್ರದಲ್ಲಿ ಸರ್ಕಾರಿ ಕೈಗಾರಿಕಾ ತರಬೇತಿ ಕೇಂದ್ರವನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಕಾರ್ಮಿಕ ರಾಜ್ಯ ಸಚಿವರ ಗಮನ ಸೆಳೆಯುವುದು.

10. ಶ್ರೀ ಬಿ.ಬಿ. ನಿಂಗಯ್ಯ ಅವರು ಮೂಡಿಗೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಬರುವ ಅಂಬಳ, ಲಕ್ಯಾ, ಮತ್ತು ಸಖರಾಯಪಟ್ಟಣ ಹೋಬಳಿಗಳನ್ನು ಎಸ್.ಡಿ.ಪಿ ಯೋಜನೆಗೆ ಸೇರ್ಪಡಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

11. ಶ್ರೀ ಸಿ.ಎಸ್. ಶಿವಳ್ಳಿ ಅವರು ಕುಂದಗೋಳ ತಾಲ್ಲೂಕನ್ನು ಬರಗಾಲ ಪ್ರದೇಶವೆಂದು ಘೋಷಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

12. ಶ್ರೀ ವಿಶ್ವನಾಥ (ಆನಂದ) ಚಂದ್ರಶೇಖರ ಮಾಮನಿ ಅವರು ರಾಜ್ಯದ ಅಧಿಸೂಚಿತ ಸಂಸ್ಥೆ/ದೇವಸ್ಥಾನಗಳ ವ್ಯವಸ್ಥಾಪನ ಸಮಿತಿಯ ಬದಲಾಗಿ ಆಡಳಿತಾಧಿಕಾರಿಯನ್ನು ನೇಮಿಸಿ ಧಾರ್ಮಿಕ ಪರಿಷತ್ತು ಹೊರಡಿಸಿರುವ ಆದೇಶಕ್ಕೆ ಕರ್ನಾಟಕ ಉಚ್ಚನ್ಯಾಯಾಲಯ ತಡೆಯಾಜ್ಞೆ ನೀಡಿರುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರ ಗಮನ ಸೆಳೆಯುವುದು.

13. ಶ್ರೀ ಹೆಚ್.ಡಿ.ರೇವಣ್ಣ ಅವರು ಹೇಮಾವತಿ ಜಲಾಶಯ ಯೋಜನೆ ಗೊರೂರು ವ್ಯಾಪ್ತಿಯ ವಿಭಾಗಗಳಲ್ಲಿ 2015-16ನೇ ಸಾಲಿನ ಕಾರ್ಯಕ್ರಮದ ಪಟ್ಟಿಯ ರೀತ್ಯಾ ಕ್ರಿಯಾಯೋಜನೆ ತಯಾರಾಗದಿರುವುದರಿಂದ ಟೆಂಡರ್ ಪ್ರಕ್ರಿಯೆ ವಿಳಂಬವಾಗಿರುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

14. ಶ್ರೀ ಎಸ್.ಭೀಮಾನಾಯ್ಕ ಅವರು ಬಳ್ಳಾರಿ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲ್ಲೂಕು ವ್ಯಾಪ್ತಿಯಲ್ಲಿರುವ ಹಲವಾರು ಗ್ರಾಮಗಳಿಗೆ ಕುಡಿಯುವ ನೀರನ್ನು ಪೂರೈಸಲು ಏತ ನೀರಾವರಿ ಯೋಜನೆಯಡಿ ಮಾಲ್ವಿ ಜಲಾಶಯಕ್ಕೆ ನೀರು ಹರಿಸುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

15. ಶ್ರೀ ನಾರಾಯಣಗೌಡ ಅವರು ಕೆ.ಆರ್.ಪೇಟೆ ತಾಲ್ಲೂಕಿನ ಅಕ್ಕಿಹೆಬ್ಬಾಳು ಸಾರ್ವಜನಿಕ ಆಸ್ಪತ್ರೆಯ ಕಟ್ಟಡ ನಿರ್ಮಾಣ ಕಾಮಗಾರಿಯು ಪೂರ್ಣಗೊಳ್ಳದಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

16. ಶ್ರೀ ಹೆಚ್.ಆರ್.ಅಲಗೂರು (ರಾಜು) ಅವರು ಬೌದ್ಧ ಧರ್ಮಕ್ಕೆ ಮತಾಂತರ ಹೊಂದಿದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ನೀಡದಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

17. ಶ್ರೀ ಎ.ಮಂಜು ಅವರು 2013ರ ಭೂಸ್ವಾಧೀನ ಕಾಯ್ದೆ ಅಡಿಯಲ್ಲಿ ಪರಿಸರ ಇಲಾಖೆಯಿಂದ ನಿರಾಕ್ಷೇಪಣ ಪತ್ರ ಪಡೆಯುವ ಅವಶ್ಯಕತೆ ಇರದ ಪ್ರಸ್ತಾವನೆಗಳಿಗೆ ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಗೊಳ್ಳಲು ನಿರ್ದೇಶನ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

18. ಶ್ರೀ ಪಿ.ಆರ್.ಸುಧಾಕರಲಾಲ್ ಅವರು ಕೊರಟಗೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮಧುಗಿರಿ ತಾಲ್ಲೂಕಿನ ಪುರವರ ಹೋಬಳಿ ಕೇಂದ್ರದಲ್ಲಿ ಉಪ ಪೊಲೀಸ್ ಠಾಣೆಯನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

19. ಶ್ರೀ ಹೆಚ್.ಎಸ್.ಶಿವಶಂಕರ ಅವರು ಹರಿಹರ ತಾಲ್ಲೂಕಿನ ಮಲೆಬೆನ್ನೂರಿನಲ್ಲಿ ಪ್ರಥಮ ದರ್ಜೆ ಕಾಲೇಜು ಇಲ್ಲದೆ ವಿದ್ಯಾರ್ಥಿಗಳಿಗೆ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

20. ಶ್ರೀಮತಿ ಶಕುಂತಳಾ ಟಿ. ಶೆಟ್ಟಿ ಅವರು ಸಾಲುಮರದ ತಿಮ್ಮಕ್ಕ ಅವರನ್ನು ವಿಶೇಷ ವ್ಯಕ್ತಿ ಎಂದು ಪರಿಗಣಿಸಿ ಗೌರವ ವೇತನ ನೀಡುವಂತೆ ಮತ್ತು ಮಾಗಡಿ ತಾಲ್ಲೂಕಿನ ಹುಲಿಕಲ್‌ನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಎಂ.ಗುರುರಾಜ
ಕಾರ್ಯದರ್ಶಿ

Raj Nagowda

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://kla.kar.nic.in/assembly/lob/lob.htm)